## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಹೆಚ್. ಜಯಪ್ರಕಾಶ್, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊನ್ನಾಳಿ ಇವರ ವಿರುದ್ಧ ಶಿಸ್ತು ಕ್ರಮ – ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-2 ರವರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:- 1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BD-1937 /2013 /DRE-1 ದಿನಾಂಕ. 08.02.2017

ಮಾನ್ಯ ಉಪ ಲೋಕಾಯುಕ್ತ-2ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ. ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BD-1937 /2013 /DRE-1 ದಿನಾಂಕ 27.01.2017

-----

**ಪ್ರಸ್ತಾವನೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 18.02.2017ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-2ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-2 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-2 ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ರಾಜ್‌ಕುಮಾರ್ ಕೆ.ಆರ್. ಬಿನ್ ರೇವಣಸಿದ್ಧಪ್ಪ, ತಳವಾರಕೇರಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರು 2013-14ನೇ ಸಾಲಿನಲ್ಲಿ ಎನ್.ಆರ್.ಡಿ.ಡಬ್ಲ್ಯೂ.ಎಸ್. ಯೋಜನೆಯಡಿಯಲ್ಲಿ ರೂ. 19.00 ಲಕ್ಷಗಳಿಗೆ ಮಂಜೂರಾದ ಹೊನ್ನಾಳಿ ತಾಲ್ಲೂಕಿನ ಯಕ್ಕನಹಳ್ಳಿ ಗ್ರಾಮದಲ್ಲಿ ಕೊಳವೆ ನೀರು ಸರಬರಾಜು ಕಾಮಗಾರಿಗೆ ಕಳಪೆ ಮಟ್ಟದ ಸಾಮಗ್ರಿಗಳನ್ನು ಉಪಯೋಗಿಸಿದ್ದರೂ ಸಹ ಇದ್ಯಾವುದನ್ನೂ ಪರಿಗಣಿಸದೇ ಹಾಗೂ ಕಾಮಗಾರಿಯ ಸ್ಥಳ ಪರಿವೀಕ್ಷಿಸದೇ ಅಂದಾಜು ಪಟ್ಟಿಯಂತೆ ಕಾಮಗಾರಿಯ ಬಿಲ್ಲನ್ನು ಪಾಸ್ ಮಾಡಿ ಶ್ರೀ ಜಯಪ್ರಕಾಶ್ ಹೆಚ್., ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಹೊನ್ನಾಳಿ ಇವರು ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆಂದು ಆಪಾದಿಸಿ, ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆ ನಡೆಸಿ ಸಲ್ಲಿಸಿರುವ ವರದಿಯಲ್ಲಿ ಸದರಿ ಕಾಮಗಾರಿಯ 1 ಮತ್ತು 2ನೇ ಬಿಲ್ಲಿನಲ್ಲಿನ ಕೈ ಬರಹ ಹಾಗೂ ಅಳತೆ ಪುಸ್ತಕದಲ್ಲಿ ನಮೂದಿಸಿರುವ ಕೈ ಬರಹಗಳು ಬೇರೆಬೇರೆಯಾಗಿದ್ದು, ಆಪಾದಿತರು ಬೇರೆಯವರಿಂದ ಬಿಲ್ಲನ್ನು ಬರಸಿರುವುದು ಸ್ಪಷ್ಟವಾಗಿ ಕಂಡುಬಂದಿರುತ್ತದೆಯೆಂದು, ಸದರಿಯವರು ಕೈಗೊಂಡಿರುವ ಕ್ರಮವು ಇಲಾಖಾ ನಿಯಮಗಳಿಗೆ ವಿರುದ್ಧವಾಗಿದ್ದು, ಇಲಾಖಾ ನಿಯಮಗಳನ್ನು ಉಲ್ಲಂಘಿಸಿ ಕರ್ತವ್ಯಲೋಪ ಎಸಗಿರುವುದು ಕಂಡುಬಂದಿರುತ್ತದೆ ಎಂದು ತಿಳಿಸಿರುತ್ತಾರೆ.

ಸದರಿ ದೂರು ಹಾಗೂ ತನಿಖಾ ವರದಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತ ಅಧಿಕಾರಿಯಿಂದ ಲಿಖಿತ ಹೇಳಿಕೆಯನ್ನು ಪಡೆಯಲಾಗಿದ್ದು, ಶ್ರೀ ರಾಜಕುಮಾರ್ ಕೆ.ಆರ್. ರವರು ಸಲ್ಲಿಸಿದ ದೂರಿಗೆ ಸಂಬಂಧಿಸಿದಂತೆ ಕಂಪ್ಲೆಂಟ್/ಉಪಲೋಕ್/ಬಿಡಿ-3332/2013 ಪ್ರಕರಣದಲ್ಲಿ ತಾಂತ್ರಿಕ ವಿಭಾಗದವರ ವರದಿಯ ಆಧಾರದ ಮೇಲೆ ಮಾನ್ಯ ಉಪಲೋಕಾಯುಕ್ತ-2 ರವರು ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿರುತ್ತಾರೆಂದು ಹಾಗೂ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ವಿಭಾಗ, ದಾವಣಗೆರೆ ಇವರು ಶ್ರೀ ಕೆ.ಆರ್.ರಾಜಕುಮಾರ್, ತಳವಾರಕೇರಿ, ಶಿಕಾರಿಪುರ ಇವರು ಮಾಡಿದ್ದ ದೂರಿನ ಬಗ್ಗೆ ದಿನಾಂಕ 29.05.2014ರಂದು ಮಾನ್ಯ ಉಪಲೋಕಾಯುಕ್ತ-2, ಬೆಂಗಳೂರು ಇವರು ಜಿಲ್ಲಾಧಿಕಾರಿಗಳ ಕಚೇರಿ, ದಾವಣಗೆರೆಯಲ್ಲಿ ದೂರುದಾರರು ಮತ್ತು ಆಪಾದಿತರ ಸಮಕ್ಷಮ ವಿಚಾರಣೆ ಮಾಡಿ ದೂರಿನಲ್ಲಿ ಯಾವುದೇ ಸತ್ಯಾಂಶವಿಲ್ಲವೆಂದು ಸದರಿ ಕೇಸನ್ನು ವಜಾ ಮಾಡಿರುತ್ತಾರೆಂದು ಹೇಳಿಕೆ ಸಲ್ಲಿಸಿರುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-2ರವರು ತನಿಖಾ ವರದಿ, ಎದುರುದಾರರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಆಪಾದಿತ ಅಧಿಕಾರಿಯಾದ ಶ್ರೀ ಜಯಪ್ರಕಾಶ್ ಹೆಚ್. ಸಹಾಯಕ ಇಂಜಿನಿಯರ್, ಪಂ.ರಾ.ಇಂ. ಉಪವಿಭಾಗ, ಹೊನ್ನಾಳಿ ಇವರು ತಮ್ಮ ಆಕ್ಷೇಪಣೆಯಲ್ಲಿ ಕೈ ಬರಹದ ವ್ಯತ್ಯಾಸದ ಬಗ್ಗೆ ಯಾವುದೇ ಸಮಜಾಯಿಷಿಯನ್ನು ನೀಡಿರುವುದಿಲ್ಲ ಅಥವಾ ಅಲ್ಲಗಳೆದಿರುವುದಿಲ್ಲವೆಂದು, ಸದರಿಯವರು ಕೈಗೊಂಡಿರುವ ಕ್ರಮವು ಇಲಾಖಾ ನಿಯಮಗಳಿಗೆ ವಿರುದ್ಧವಾಗಿದ್ದು ಹಾಗೂ ಸದರಿಯವರ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡುಬರುವುದಿಲ್ಲವೆಂದು, ಸದರಿಯವರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-2ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಯಕ್ಕನಹಳ್ಳಿ ಗ್ರಾಮದಲ್ಲಿ ಕೊಳವೆ ನೀರು ಸರಬರಾಜು ಯೋಜನೆ ಕಾಮಗಾರಿಗೆ ಸಂಬಂಧಿಸಿದ 1 ಮತ್ತು 2ನೇ ಬಿಲ್ಲಿನಲ್ಲಿನ ಕೈ ಬರಹ ಹಾಗೂ ಸದರಿ ಕಾಮಗಾರಿಯ ಅಳತೆ ಪುಸ್ತಕದಲ್ಲಿ ನಮೂದಿಸಿರುವ ಬಿಲ್ಲಿನ ಕೈ ಬರಹಗಳು ಬೇರೆ ಬೇರೆಯಾಗಿದ್ದು, ಆಪಾದಿತ ಅಧಿಕಾರಿಯು ಬೇರೆಯವರಿಂದ ಬಿಲ್ಲನ್ನು ಬರೆಸುವುದರ ಮೂಲಕ ಇಲಾಖಾ ನಿಯಮಗಳನ್ನು ಉಲ್ಲಂಘಿಸಿ ಕರ್ತವ್ಯಲೋಪ ಎಸಗಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಆದ್ದರಿಂದ ಆಪಾದಿತ ಅಧಿಕಾರಿಯಾದ ಶ್ರೀ ಹೆಚ್.ಜಯಪ್ರಕಾಶ್, ಸಹಾಯಕ ಇಂಜಿನಿಯರ್ ಇವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) (i) (ii) & (iii) ನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವೆಂದು ಕಂಡುಬರುತ್ತದೆ. ಆದ್ದರಿಂದ, ಸದರಿಯವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-2 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 23 ಇಎಸ್‌ಕ್ಯೂ 2017 ಬೆಂಗಳೂರು,</u>**
**<u>ದಿನಾಂಕ. 06.05.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಹೆಚ್. ಜಯಪ್ರಕಾಶ್, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊನ್ನಾಳಿ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-2 ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

06/05/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ.

5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
7. ಉಪ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸಂಬಂಧಪಟ್ಟ ಆಪಾದಿತ ಅಧಿಕಾರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಬಿ&ಸಿ).
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.